# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 933 |
| ಸದಸ್ಯರ ಹೆಸರು | ಶ್ರೀ ಡಾ: ಎಂ.ಜಿ.ಮುಳೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 19.08.2025 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

<table>
<tr><th>ಕ್ರ. ಸಂ</th><th>ಪ್ರಶ್ನೆಗಳು</th><th>ಉತ್ತರ</th></tr>
<tr><td>ಅ</td><td>ಬೀದರ ಜಿಲ್ಲೆಯಲ್ಲಿ ಅಕ್ರಮ ಮರಳು ದಂಧೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮವೇನು:</td><td rowspan="2">ಸರ್ಕಾರವು ಬೀದರ್ ಜಿಲ್ಲೆ ಸೇರಿ ರಾಜ್ಯಾದ್ಯಂತ ಅಕ್ರಮ ಮರಳುಗಾರಿಕೆಯನ್ನು ತಡೆಗಟ್ಟಲು ಕೈಗೊಂಡ ಕ್ರಮಗಳು ಈ ಕೆಳಕಂಡಂತಿವೆ:<br><br>1. ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮರಳು ಸಮಿತಿ ಹಾಗೂ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿರುತ್ತದೆ. ಸದರಿ ಸಮಿತಿಯಲ್ಲಿ ಕಂದಾಯ, ಪೊಲೀಸ್, ಅರಣ್ಯ, ಲೋಕೋಪಯೋಗಿ, ಜಿಲ್ಲಾ ಪಂಚಾಯತ್, ಗಣಿ ಮತ್ತು ಭೂವಿಜ್ಞಾನ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಸದಸ್ಯರುಗಳಾಗಿರುತ್ತಾರೆ. ಸದರಿ ಇಲಾಖೆಗಳ ಅಧಿಕಾರಿಗಳಿಗೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಯಲು ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ 1957ರ ಕಲಂ 4(1), 4(1-A) ಮತ್ತು ಕಲಂ 21 ಮತ್ತು 22 ರಡಿಯಲ್ಲಿ ಹಾಗೂ ಕೆಎಂಎಂಸಿ ನಿಯಮಗಳು, 1994 ರ ನಿಯಮ 31-Rರ ಉಪ ನಿಯಮ 12 ರಂತೆ ಕ್ರಮವಹಿಸಲು ಅಧಿಕಾರ ಪ್ರತ್ಯೋಜಿಸಲಾಗಿರುತ್ತದೆ.<br><br>2. ಬೀದರ್ ಜಿಲ್ಲೆಯಲ್ಲಿ ಕಳೆದ 03 ವರ್ಷಗಳಲ್ಲಿ ಅನಧಿಕೃತ ಮರಳು ಗಣಿಗಾರಿಕೆಯಡಿ 2 ಪ್ರಕರಣಗಳನ್ನು ಪತ್ತೆ ಹಚ್ಚಿದ್ದು, ಒಂದು ಪ್ರಕರಣದಲ್ಲಿ ₹50,000 ದಂಡವನ್ನು ವಿಧಿಸಿ ಸಂಗ್ರಹಿಸಲಾಗಿರುತ್ತದೆ. ಮತ್ತೊಂದು ಪ್ರಕರಣಕ್ಕೆ ಸಂಬಂಧಪಟ್ಟಂತೆ ನ್ಯಾಯಾಲಯದಲ್ಲಿ ಕೇಸನ್ನು ದಾಖಲಿಸಲಾಗಿರುತ್ತದೆ.<br><br>3. ಅಲ್ಲದೇ, ಬೀದರ್ ಜಿಲ್ಲೆಗೆ ನೆರೆ ಜಿಲ್ಲೆಗಳಿಂದ ರವಾನೆ ಪರವಾನಿಗೆ ಇಲ್ಲದೇ ಸಾಗಾಣಿಕೆ ಮಾಡುತ್ತಿದ್ದ ಮರಳು ಸಾಗಾಣಿಕೆ ವಾಹನಗಳನ್ನು ಪತ್ತೆ ಹಚ್ಚಲಾಗಿದ್ದು, ಈ ಕುರಿತು ಕಳೆದ 3 ವರ್ಷಗಳಲ್ಲಿ ಸಂಗ್ರಹಿಸಲಾದ ದಂಡದ ಮೊತ್ತ ಹಾಗೂ ದಾಖಲಿಸಲಾದ ಪ್ರಕರಣಗಳ ವಿವರಗಳು ಈ ಕೆಳಗಿನಂತಿರುತ್ತದೆ.<br><br>
<table>
<tr><th rowspan="2">ವರ್ಷ</th><th colspan="3">ಅನಧಿಕೃತ ಮರಳು ಸಾಗಾಣಿಕೆ</th></tr>
<tr><th>ಪತ್ತೆ ಹಚ್ಚಿದ ಪ್ರಕರಣಗಳ ಸಂಖ್ಯೆ</th><th>ಸಂಗ್ರಹಿಸಲಾದ ದಂಡದ ಮೊತ್ತ (₹.ಲಕ್ಷಗಳಲ್ಲಿ)</th><th>ಕೇಸ್ ದಾಖಲಿಸಿದ ಪ್ರಕರಣಗಳು</th></tr>
<tr><td>2022-23</td><td>100</td><td>50.32</td><td>-</td></tr>
<tr><td>2023-24</td><td>49</td><td>17.89</td><td>-</td></tr>
<tr><td>2024-25</td><td>46</td><td>17.56</td><td>3</td></tr>
<tr><td>2025-26 (July-2025)</td><td>9</td><td>3.18</td><td>-</td></tr>
</table>
</td></tr>
<tr><td>ಆ</td><td>ಈ ಜಿಲ್ಲೆಯಲ್ಲಿ ಅಕ್ರಮ ಮರಳುಗಾರಿಕೆಯಡಿ ದಾಖಲಾದ ಪ್ರಕರಣಗಳು ಎಷ್ಟು; (ಪ್ರಕರಣಗಳ ವಿವರ ನೀಡುವುದು)</td></tr>
</table>

| | | |
|---|---|---|
| ಇ) | ಅಕ್ರಮ ಮರಳುಗಾರಿಕೆಯಿಂದ ನದಿ ತೀರಗಳು, ಅರಣ್ಯ ಪ್ರದೇಶವು ಬರಡು ಭೂಮಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ನದಿ ಹಾಗೂ ಅರಣ್ಯ ರಕ್ಷಣೆಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು? | • ಬೀದರ ಜಿಲ್ಲೆಯಲ್ಲಿ ಮಾಂಜ್ರಾ ನದಿಯು ಹರಿಯುತ್ತಿದ್ದು, ಅದರಲ್ಲಿ ಮಣ್ಣು ಮಿಶ್ರಿತ ಕಪ್ಪು ಮರಳು ಲಭ್ಯವಿದ್ದು, ಲೊಕೋಪಯೋಗಿ ಇಲಾಖೆಯವರ ಮರಳು ವಿಶ್ಲೇಷಣಾ ವರದಿಯಂತೆ ಕಟ್ಟಡ ಕಾಮಗಾರಿಗಳಿಗೆ ಗುಣಮಟ್ಟವು ಯೋಗ್ಯವಾಗಿರುವುದಿಲ್ಲವೆಂದು ತಿಳಿಸಿರುವುದರಿಂದ ಯಾವುದೇ ಮರಳು ನಿಕ್ಷೇಪಗಳನ್ನು ಗುರುತಿಸಿರುವುದಿಲ್ಲ. ಆದ್ದರಿಂದ ಬೀದರ ಜಿಲ್ಲೆಯಲ್ಲಿ ಮರಳು ಗಣಿಗಾರಿಕೆಯಿಂದ ನದಿ ಪಾತ್ರಗಳು ಬರಡು ಭೂಮಿಯಾಗುತ್ತಿರುವುದು ಕಂಡು ಬಂದಿರುವುದಿಲ್ಲ.<br><br>• ಮುಂದುವರೆದು, ಅರಣ್ಯ ಪ್ರದೇಶದ ವ್ಯಾಪ್ತಿಯಲ್ಲಿರುವ ನದಿ ಪಾತ್ರಗಳಲ್ಲಿ ಮರಳು ಗಣಿಗಾರಿಕೆಗೆ ಅವಕಾಶ ನೀಡಿರುವುದಿಲ್ಲ. |

ಸಂಖ್ಯೆ ಸಿಐ -ಎಂಎಂಎನ್/224/2025

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.